ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8 ]
Total No. of Printed Pages : 8 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 45 ]
Total No. of Questions : 45 ]

**ಸಂಕೇತ ಸಂಖ್ಯೆ : 01-K**

**Code No. : 01-K**

**A**

**CCE RR**
**REVISED**

**Question Paper Serial No. 30**

ಇಲ್ಲಿಂದ ಕತ್ತರಿಸಿ

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಹೊಸ ಪಠ್ಯಕ್ರಮ / New Syllabus)**

**(ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Repeater)**

ದಿನಾಂಕ : 22. 09. 2020 ] [ Date : 22. 09. 2020

ಸಮಯ : ಬೆಳಗ್ಗೆ 10-30 ರಿಂದ ಮಧ್ಯಾಹ 1-45 ರವರೆಗೆ ] [ Time : 10-30 A.M. to 1-45 P.M.

ಗರಿಷ್ಠ ಅಂಕಗಳು : 100 ] [ Max. Marks : 100

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

### *ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :*

1. ಈ ಪ್ರಶ್ನೆಪತ್ರಿಕೆಯು 45 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

**Tear here**

I. **ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** 6 × 1 = 6

1. 'ಸೂರ್ಯೋದಯ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

   (ಎ) ಸವರ್ಣದೀರ್ಘ ಸಂಧಿ (ಬಿ) ವೃದ್ಧಿ ಸಂಧಿ

   (ಸಿ) ಗುಣ ಸಂಧಿ (ಡಿ) ಯಣ್ ಸಂಧಿ

2. ಬಟ್ಟೆಗಿರಣಿ ರಟ್ಟು ಪೆನ್ಸಿಲ್ ತಯಾರಿಕಾ ಘಟಕಗಳನ್ನು ಸ್ಥಾಪಿಸಲಾಗಿದೆ. ಈ ವಾಕ್ಯದಲ್ಲಿ ಇರಬೇಕಾದ ಲೇಖನ ಚಿಹ್ನೆ

   (ಎ) ಅಲ್ಪವಿರಾಮ (ಬಿ) ಅರ್ಧವಿರಾಮ

   (ಸಿ) ಆವರಣ (ಡಿ) ವಿವರಣಾ

3. 'ಮುಕ್ಕಣ್ಣು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ

   (ಎ) ಅಂಶಿ (ಬಿ) ದ್ವಂದ್ವ

   (ಸಿ) ಕ್ರಿಯಾ (ಡಿ) ದ್ವಿಗು

4. ಹಳಗನ್ನಡದಲ್ಲಿ 'ಅಧಿಕರಣ' ಕಾರಕಾರ್ಥದ ವಿಭಕ್ತಿ ಪ್ರತ್ಯಯ

   (ಎ) ಇಂದಂ (ಬಿ) ಒಳ್

   (ಸಿ) ಅಂ (ಡಿ) ಅತ್ತಣಿಂದಂ

5. 'ನೋಡು' ಧಾತುವಿನ ನಿಷೇಧಾರ್ಥಕ ರೂಪ

   (ಎ) ನೋಡಲಿ (ಬಿ) ನೋಡೇವು

   (ಸಿ) ನೋಡದು (ಡಿ) ನೋಡಿಯಾನು

6. ರೊಯ್ಯನೆ, ಸುಯ್ಯನೆ ಪದಗಳು ಈ ಅವ್ಯಯಕ್ಕೆ ಉದಾಹರಣೆಯಾಗಿವೆ

   (ಎ) ಸಾಮಾನ್ಯಾವ್ಯಯ (ಬಿ) ಅನುಕರಣಾವ್ಯಯ

   (ಸಿ) ಅವಧಾರಣಾರ್ಥಕಾವ್ಯಯ (ಡಿ) ಕ್ರಿಯಾರ್ಥಕಾವ್ಯಯ

II. **ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** 4 × 1 = 4

7. ಕೆನೆಮೊಸರು : ಜೋಡುನುಡಿ :: ಬಟ್ಟಬಯಲು : ......................... .

8. ಗುರು ಒಂದು ಆದಿಯೊಳ್ : ಉತ್ಪಲ :: ಲಘು ನಾಲ್ಕು : ......................... .

9. ಹನ್ನೆರಡು : ಸಂಖ್ಯಾವಾಚಕ :: ಮೂಡಣ : ......................... .

10. ದಿಟ್ಟಿ : ದೃಷ್ಟಿ :: ತವಸಿ : ......................... .

III. **ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ :** $7 \times 1 = 7$

11. ರಾಮಲಕ್ಷ್ಮಣರಿಗೆ ಮತಂಗಾಶ್ರಮಕ್ಕೆ ಹೋಗಲು ಸೂಚಿಸಿದವರು ಯಾರು ?

12. ಶಾನುಭೋಗರು ತಮ್ಮ ಹಳ್ಳಿಯನ್ನು ತಲುಪಬೇಕಾದರೆ ಯಾವ ಕಣಿವೆಯನ್ನು ದಾಟಿ ಹೋಗಬೇಕಿತ್ತು ?

13. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು ?

14. ಸುಕುಮಾರಸ್ವಾಮಿಗೆ ಯಾವ ಪಟ್ಟವನ್ನು ಕಟ್ಟಲಾಯಿತು ?

15. ಶ್ರೀಕೃಷ್ಣನು ಕರ್ಣನನ್ನು ಮೈದುನತನದ ಸರಸವೆಸಗಿ ರಥದಲ್ಲಿ ಹೇಗೆ ಕುಳ್ಳಿರಿಸಿಕೊಂಡನು ?

16. ಲವನು ಕುದುರೆಯನ್ನು ಯಾವುದರಿಂದ ಕಟ್ಟಿದನು ?

17. ಸುಂದರಿಗೆ ಮೃಗದ ಮಾತು, ನಡವಳಿಕೆಗಳು ನಗು ತರಿಸುವಂತಿದ್ದರೂ ಮನಕರಗುತ್ತಿತ್ತು ಏಕೆ ?

IV. **ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $10 \times 2 = 20$

18. ಲಂಡನ್ನಿನ ವೆಸ್ಟ್ ಮಿನ್‌ಸ್ಟರ್ ಅಬೆಯಲ್ಲಿನ ಸಿಂಹಾಸನದ ಮೇಲಿರುವ ಕಲ್ಲುಪಾಟಿಯ ವಿಶೇಷತೆಯನ್ನು ತಿಳಿಸಿ.

19. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ ?

20. ಹುಲಿಯು ನಿರಾಶೆ ಹೊಂದಿ ಕೋಪದಿಂದ ಘರ್ಜಿಸಿ ಪಲಾಯನ ಮಾಡಲು ಕಾರಣವೇನು ?

21. ಅರಸ ವೃಷಭಾಂಕನು ಆಶ್ಚರ್ಯಗೊಂಡು ಯಶೋಭದ್ರೆಯ ಮನೆಗೆ ಆಗಮಿಸಲು ಕಾರಣವೇನು ?

22. ಹಲಗಲಿಯ ಮೇಲೆ ಬ್ರಿಟಿಷರ ದಂಡು ಹೇಗೆ ದಾಳಿ ನಡೆಸಿತು ?

23. ಕುಂಪಣಿ ಸರಕಾರದ ವಿರುದ್ಧ ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?

24. ಮನುಷ್ಯತ್ವದ ಮಹಿಮೆಯನ್ನು ಕುರಿತು ವಿವೇಕಾನಂದರ ಅಭಿಪ್ರಾಯವೇನು ?

25. ಕತ್ತಲೆ ಗವ್ವೆನ್ನುವ ಗುಡಿಸಲೊಳಗೆ ಬರಲು ವಸಂತನಿಗೂ ಹೆದರಿಕೆಯಾದದ್ದು ಏಕೆ ?

26. ಭಗತ್‌ಸಿಂಗ್ ತನ್ನ ಸಹಚರರೊಂದಿಗೆ ಮರಣ ದಂಡನೆಗೆ ಈಡಾಗಲು ಕಾರಣವೇನು ?

27. 'ತಾವರೆ ಬೇರು' ಎಂಬ ಉತ್ತರ ಬರುವ ಒಗಟಿನ ವಿಶೇಷತೆಯನ್ನು ತಿಳಿಸಿ.

V. **ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** $2 \times 3 = 6$

28. ಪು.ತಿ. ನರಸಿಂಹಾಚಾರ್

29. ಜಿ.ಎಸ್. ಶಿವರುದ್ರಪ್ಪ

VI. **ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** 1 × 3 = 3

30. ಎಲೆ ಶಬರ ಕಾಡ ಬಡನರಿ

ಮೊಲ ಪುಲ್ಲೆಗಳಲ್ಲಿ ನಿನ್ನ ಸಾಹಸಮುಂದೋ

VII. **ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** 1 × 3 = 3

31. "ಗೀಜುಗನ ಗೂಡುಗಳು ತೂಗುವ ತೊಟ್ಟಿಲಿನಂತೆ ತೂಗುತ್ತಿದ್ದವು"

VIII. **ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ :** 1 × 3 = 3

32. ಅರಮನೆಗಿಂತ ನೆರೆಮನೆ ಲೇಸು

***ಅಥವಾ***

ಮಾಡಿದ್ದುಣ್ಣೋ ಮಹರಾಯ

IX. **ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 6 × 3 = 18

33. "ನಾನು ಯುದ್ಧ ಮಾಡುವ ಮೂರ್ಖರ ಕಡೆಯವನಲ್ಲ"

34. "ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ."

35. "ಹುಸಿಯದ ಬೇಹಾರಿಯೇ ಇಲ್ಲ."

36. "ನಿನ್ನಯ ವೀರರ್ವೈರ ನೋಯಿಸೆನು ರಾಜೀವಸಖನಾಣೆ"

37. "ಹಸುರತ್ತಲ್, ಹಸುರಿತ್ತಲ್, ಹಸುರೆತ್ತಲ್"

38. "ಪಾರ್ವರ ಮಕ್ಕಳಂಜಿದೊಡೆ ಜಾನಕಿಯ ಮಗನಿದಕೆ ಬೆದರುವನೆ"

X. **ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** 1 × 4 = 4

39. ಯುಗ–ಯುಗಗಳ ..................................................

......................................................................

......................................................................

............................................................ ಹರಸಿ

ಹಕ್ಕಿ ಹಾರುತಿದೆ ನೋಡಿದಿರಾ ?

***ಅಥವಾ***

ನೀಲಮೇಘ ....................................................

......................................................................

......................................................................

............................................................ ಕಣ್ಣಾ

ಹಕ್ಕಿ ಹಾರುತಿದೆ ನೋಡಿದಿರಾ ?

XI. **ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** 1 × 4 = 4

40. ಒಡವೆಯನರ್ಥಿಗಿತ್ತೆನವನೀತಳಮಂ ಗುರುಗಿತ್ತೆನೀಗಳೊಂ
ದಡೆಕೆಯುಮಿಲ್ಲ ಕೈಯೊಳೆರೆದಂ ಶ್ರುತಪಾರಗನೆಂತು ಸಂತಸಂ
ಬಡಿಸುವೆನಿನ್ನಿದೊಂದು ಧನುವಿರ್ದುದು ದಿವ್ಯಶರಾಳಿಯಿರ್ದುದಿ
ಲ್ಲೊಡಮೆ ಸಮಂತು ಪೇಟಿವರೊಳಾವುದನೀವುದೊ ಕುಂಭಸಂಭವ

XII. **ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 2 × 4 = 8

41. ವಿಶ್ವೇಶ್ವರಯ್ಯ ಅವರು ಮುಂಬೈ ಪ್ರಾಂತ್ಯದ ಲೋಕೋಪಯೋಗಿ ಇಲಾಖೆಯಲ್ಲಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

***ಅಥವಾ***

ನಾಲ್ವಡಿ ಕೃಷ್ಣರಾಜ ಒಡೆಯರು ಸ್ಥಾಪಿಸಿದ 'ನ್ಯಾಯ ವಿಧಾಯಕ ಸಭೆ' ಮತ್ತು ಜಾರಿಗೆ ತಂದ ಸಾಮಾಜಿಕ ಕಾನೂನುಗಳನ್ನು ಕುರಿತು ಬರೆಯಿರಿ.

42. ದುರ್ಯೋಧನನ ಛಲದ ಗುಣ ಅವನ ಮಾತುಗಳಲ್ಲಿ ವ್ಯಕ್ತವಾಗಿರುವ ಬಗೆಯನ್ನು ವಿವರಿಸಿ.

***ಅಥವಾ***

ಭೀಷ್ಮ ಮತ್ತು ದುರ್ಯೋಧನರ ನಡುವಿನ ಸಂಭಾಷಣೆಯ ಸ್ವಾರಸ್ಯವನ್ನು ವಿವರಿಸಿ.

XIII. **ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** 1 × 4 = 4 ( 2 + 2 )

ವಿಜ್ಞಾನದ ಯಾವುದೇ ವಿಭಾಗ ಸಮಾಜದ ಒಳಿತಿಗಾಗಿ ನೆರವಾಗಬಲ್ಲದು. ವಿಶೇಷವಾಗಿ ರಸಾಯನಶಾಸ್ತ್ರ ಜೀವನದ ಅನೇಕ ಕ್ಷೇತ್ರಗಳಲ್ಲಿ ಬಳಕೆಯಾಗಿರುವುದು ಕಂಡುಬರುತ್ತದೆ. ರಾಸಾಯನಿಕ ಕ್ರಿಯೆಗಳಿಲ್ಲದ ಕಾರ್ಯಗಳೇ ಅಪರೂಪ. ವಿಜ್ಞಾನದ ಈ ವಿಭಾಗದಲ್ಲಿ ಆಳವಾದ ಸಂಶೋಧನೆಗಳು ನಡೆದು ಮನುಕುಲದ ಪ್ರಗತಿಗೆ (ಏಳಿಗೆಗೆ) ಕಾರಣೀಭೂತವಾಗಬೇಕಾಗಿದೆ.

ವಿಜ್ಞಾನಿಗಳು ತಮ್ಮ ಅಮೂಲ್ಯವಾದ ಜ್ಞಾನವನ್ನು ಸಾಮಾನ್ಯ ಜನರ ಮನೋಭಾವಗಳನ್ನು ತಿದ್ದುವ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕು. ಸಮಾಜದ ಸುಧಾರಣೆಗೆ ನೆರವಾಗಬೇಕು. ವಿಜ್ಞಾನಿಯ ವರ್ತನೆ,

ಮನೋಭಾವ ಅವನು ದಂತಗೋಪುರದಲ್ಲಿರುವ ಅಪೂರ್ವಬುದ್ಧಿಶಾಲಿ ಎಂಬ ಭಾವನೆ ಜನರಲ್ಲಿ ಮೂಡುವಂತಿರಬಾರದು. ಸಮಾಜದ ದುಡಿಮೆಯಲ್ಲಿ ಶಿಕ್ಷಣವನ್ನು ಪಡೆದಿರುವ ವಿಜ್ಞಾನಿ, ಸಾಮಾನ್ಯ ಜನರ ಯೋಚನಾಶಕ್ತಿಯನ್ನು ಬೆಳೆಸುವಲ್ಲಿ ಶ್ರಮಿಸುವುದು ಆತನ ಕರ್ತವ್ಯವೇ ಹೊರತು ಉಪಕಾರವೇನೂ ಅಲ್ಲ. ವಿಶೇಷ ಸಂದರ್ಭಗಳಲ್ಲಿ ಜನಪ್ರಿಯ ಉಪನ್ಯಾಸಗಳು ವಿಜ್ಞಾನ ವಿಷಯದಲ್ಲಿ ಆಸಕ್ತರಾಗಿರುವ ಬಹು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಸಹಾಯವಾಗುತ್ತದೆ.

ನಮ್ಮ ದೇಶದಲ್ಲಿ ವಿಜ್ಞಾನಿಗಳು ಹಲವಾರು ಸಂದರ್ಭಗಳಲ್ಲಿ ಪರಸ್ಪರ ವೈರುಧ್ಯದ ಮನೋಭಾವವನ್ನು ವ್ಯಕ್ತಪಡಿಸುತ್ತಿರುವುದು ದುರದೃಷ್ಟಕರ. ಅವರು ಪ್ರಯೋಗಶಾಲೆಗಳಲ್ಲಿ ತಮ್ಮ ಹೆಚ್ಚಿನ ವಿಚಾರಶಕ್ತಿಯನ್ನೂ, ವೈಜ್ಞಾನಿಕ ಮನೋಭಾವವನ್ನೂ ಪ್ರದರ್ಶಿಸುತ್ತಾರೆ. ಆದರೆ ಅದು ನಿಜ ಜೀವನದಲ್ಲಿ ಅವರ ಯೋಚನಾ ಶಕ್ತಿ 'ರಜೆ' ತೆಗೆದುಕೊಂಡಿದೆಯೋ ಎಂಬಂತೆ ಅವೈಜ್ಞಾನಿಕವಾಗಿ ವರ್ತಿಸುತ್ತಾರೆ. ಒಂದೇ ಮನಸ್ಸು ಒಮ್ಮೆ ತಾರ್ಕಿಕವಾಗಿ ಚಿಂತಿಸಿದರೆ ಮತ್ತೊಮ್ಮೆ ಅತಾರ್ಕಿಕವಾಗಿ ಯೋಚಿಸುತ್ತದೆ. ಯೋಚನೆಯಲ್ಲಿ ಏಕಸೂತ್ರತೆ ಕಂಡುಬರುವುದಿಲ್ಲ.

43. *ಪ್ರಶ್ನೆಗಳು :*

ಅ) ವಿಜ್ಞಾನಿಗಳ ವ್ಯರುಧ್ಯ ಭಾವನೆಯನ್ನು ತಿಳಿಸಿ.

ಬ) ಸಮಾಜದ ಸುಧಾರಣೆಗೆ ವಿಜ್ಞಾನಿಗಳು ಹೇಗೆ ನೆರವಾಗಬೇಕು ?

XIV. **ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :** $1 \times 5 = 5$

44. ನಿಮ್ಮನ್ನು ಶಿವಮೊಗ್ಗದ ಸರ್ಕಾರಿ ಪ್ರೌಢಶಾಲೆಯ 'ಅಂಜಲಿ' ಎಂದು ಭಾವಿಸಿಕೊಂಡು, ಶಾಲೆಯಲ್ಲಿ 'ಭಾಷಾ ಪ್ರಯೋಗಾಲಯ' ಪ್ರಾರಂಭಿಸಲು ಅಗತ್ಯ ನೆರವು ನೀಡುವಂತೆ ಮೈಸೂರಿನ ಕೇಂದ್ರೀಯ ಭಾಷಾ ಸಂಸ್ಥಾನದ ನಿರ್ದೇಶಕರಿಗೆ ಮನವಿ ಪತ್ರವನ್ನು ಬರೆಯಿರಿ.

***ಅಥವಾ***

ನಿಮ್ಮನ್ನು ಧಾರವಾಡದ ಸರ್ಕಾರಿ ಪ್ರೌಢಶಾಲೆಯ 'ರಮೇಶ್' ಎಂದು ಭಾವಿಸಿಕೊಂಡು, ಶಾಲೆಯಲ್ಲಿ ನಡೆಯುವ 'ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮಕ್ಕೆ ಆಗಮಿಸುವಂತೆ ವಿನಂತಿಸಿ ಮಡಿಕೇರಿಯ ಪೇಟೆ ಬೀದಿಯ ನಿವಾಸಿ 'ನಟರಾಜು' ಎಂಬ ಹೆಸರಿನ ತಂದೆಗೆ ಪತ್ರವನ್ನು ಬರೆಯಿರಿ.

XV. **ಕೆಳಗಿನ ಯಾವುದಾದರೂ *ಒಂದು* ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ :** $1 \times 5 = 5$

45. ಶಾಲಾಭಿವೃದ್ಧಿಯಲ್ಲಿ ಜನಪ್ರತಿನಿಧಿಗಳ ಪಾತ್ರ.

***ಅಥವಾ***

ನನ್ನ ನೆಚ್ಚಿನ ಪ್ರವಾಸಿತಾಣಗಳು.